8. ಕಮ್ಮಿ ದರದ ಟೆಂಡರ್ ಆಗಲಿ ಯಾ ಮತ್ಯಾವ ಟೆಂಡರ್ ಆಗಲಿ ಅಂಗೀಕರಿಸುವದಕ್ಕೆ ಡೆಪ್ಯುಟಿ ಕ್ಷಸರ್‌ವೇಟರು ಸ್ವತಂತ್ರರಾಗಿ ಯಿರುತ್ತಾರೆ. ಮತ್ತು ಅಂಥಾ ಅಂಗೀಕಾರವು ಫಾರೆಸ್ಟ್ ಕ್ಷಸರ್‌ವೇಟರ್ ಸಾಹೆಬರವರ ಮಂಜೂರಾತಿಗೆ ವಳಪಟ್ಟಿರತಕ್ಕದ್ದು.

9. ಜಂಗಲಿನಿಂದ ನಾಟಾಗಳನ್ನು ಸಾಗಿಸುವದಕ್ಕೊಸ್ಕರ ಬೇಕಾಗುವ ವಿಘಾಡುಗಳನ್ನು ಕಂಟ್ರಾಕ್ಟುದಾರನೇ ಮಾಡಿಕೊಳ್ಳತಕ್ಕದ್ದು. ಸರಕಾರದವರು ರಸ್ತೆಯನ್ನಾಗಲಿ ಭಂಡಿದಾರಿಯನ್ನಾಗಲಿ ಮಾಡಿಸಿ ಕೊಡುವದಕ್ಕೆ ಬದ್ಧರಾಗಿರುವದಿಲ್ಲ ಮತ್ತು ಈ ನೆಪದಿಂದ ನಾಟಾ ವಗೈರೆ ವಾಯಿದೆಯಲ್ಲಿ ತಾರದಿದ್ದರೆ ಈ ಕಾರಣವು ಅಂಗೀಕರಿಸಲ್ಪಡಲಾರದು.

10. ಇನ್ಯಾವ ಸಂಗತಿಗಳಾದರೂ ತಿಳಿದುಕೊಳ್ಳಬೇಕಾಗಿದ್ದಲ್ಲಿ ಶಿವಮೊಗ್ಗಾ ಡಿಸ್ಟ್ರಿಕ್ಟು ಡೆಪ್ಯುಟಿ ಕ್ಷಸರ್‌ವೇಟರ ಆಫಿಸಿನಲ್ಲಿ ಕೇಳತಕ್ಕದ್ದು, ಮತ್ತು ಅಲ್ಲಿ ನೋಟಿಸ್ ಹಲಿಗೇ ಮೇಲೆ ಇಸ್ತಿಹಾರ್‌ನಾಮೆಯ ನಕಲು ಮತ್ತು ಕಂಟ್ರಾಕ್ಟು ಮುಚ್ಚಳಿಕೆ ನಕಲು ಸಹ ನೋಡಬಹುದು.

ಸಿ. ನಾರಾಯಣರಾವ್,
ಡೆ॥ ಕ್ಷಸರ್‌ವೇಟರ್.

ನೋಟಿಸ್.

ತಾರೀಖು 26ನೇ ಆಗಸ್ಟ್ 1896.

ಗೆಜೆಟ್ ಚಂದಾದಾರರು ಚಂದಾ ಹಣವನ್ನು ಪೋಸ್ಟ್‌ಆಫಿಸ್ ಮನಿಆರ್ಡರ್ ಮೂಲಕ ಕಳುಹಿಸುತ್ತಾ ಅವರ ಹೆಸರು ಸರಿಯಾದ ವಿಳಾಸ ಮುಂತಾದ ತಪ್ಪಿಲ್ಲದೆ ತಿಳಿಸಬೇಕೆಂತಲೂ ಮತ್ತು ರಿಕಾರ್ಡಿನಲ್ಲಿ ಯಿಡುವದಕ್ಕೆ ವಿಶೇಷ ಅನನುಕೂಲವಾಗಿರುವಂಥಾ ಕೂಪರ್ಗಳ ಮೇಲೆ ಅಸ್ಪಷ್ಟವಾಗಿ ಬರಿಯುವದರಿಂದಲೂ ವಿಶೇಷ ಗಲಾಟೆಗೆ ಆಸ್ಪದವಾಗಿರುವದರಿಂದ ಸರ್ವರಿಗೂ ತಿಳಿಸುವದೇನಂದರೆ,—ಯಲ್ಲಾ ತಾಲ್ಲೂಕು ಖಜಾನೆಗಳಲ್ಲಿಯೂ ಗೆಜೆಟ್ ಚಂದಾ ಮೊಬಲಗು ತೆಗದುಕೊಂಡು ರಸೀತಿ ಕೊಡುವ ಬಗ್ಯಾಗಿ ಆಜ್ಞೆ ಯಿಶುವದ್ದರಿಂದ ಇನ್ನು ಮೇಲೆ ಮೈಸೂರ್ ಕೀಮೆ ಅಲ್ಲದ ಇತರ ಸ್ಥಳಗಳಿಂದ ಬರುವ ಮನಿಆರ್ಡರ್ ಹೊರ್ತಾಗಿ ಅನ್ಯಥಾ ಆ ಬಗ್ಯಾಗಿ ಈ ಆಫಿಸಿಗೆ ಕಳುಹಿಸಲ್ಪಡುವ ಯಾವ ಮನಿಆರ್ಡರುಗಲಿ ಈ ಆಫಿಸಿನಲ್ಲಿ ಅಂಗೀಕರಿಸಲ್ಪಡಲಾರದು ಮತ್ತು ಪೋಸ್ಟ್ ಕಾರ್ಡ್ ಮೂಲಕ ಅಥವಾ ನೋಟ್ ಪೇಪರಿಗಿಂತಲೂ ಕಮ್ಮಿಯಾದ ಕಾಗದ್ದಲ್ಲಿ ಬರಿಯಲ್ಪಡುವ ಯಾವ ಅಂಶಕ್ಕೂ ನಿಗೆ ಕೊಡಲ್ಪಡಲಾರದು.

ತಾರೀಖು 12ನೇ ಆಗಸ್ಟ್ 1896, ಬೆಂಗಳೂರು.

ಇದರಿಂದ ತಿಳಿಯಪಡಿಸುವದೇನಂದರೆ,—ಸುಬ್ಬಣ್ಣಯ್ಯ ಯಂಬ ಹೆಸರಿನಿಂದ ಮೈಸೂರ ಗೆಜೆಟ್ಟಿನ ಬಗ್ಯಾಗಿ ಈ ಆಫಿಸಿಗೆ ರೂ. 3 ಆಣೆ 8 ಮನಿ ಆರ್ಡರ್ ಬಂದಿರುತ್ತೆ. ಮನಿ ಆರ್ಡರ್ ಕೂಪರ್ನಲ್ಲಿ ಚಂದಾದಾರ್ರ ವಿಳಾಸ ಬರಿಯಲಿಲ್ಲವಾದ್ದರಿಂದ ಸದರೀ ಸುಬ್ಬಣ್ಣಯ ಯಂಬುವರು, ಅವರಿಗೆ ಗೆಜೆಟ್ ತಲಪುವದು ಅವಶ್ಯಕವಾಗಿದ್ದಲ್ಲಿ ಸರಿಯಾದ ಮೇಲ್ವಿಳಾಸ ಬರದು ಕಳುಹಿಸತಕದ್ದು.

ಮೈಸೂರ ಗೆಜೆಟ್ ಚಂದಾ ದರ ವಗೈರೆ.

ತಾರೀಖು 26ನೇ ಜನವರಿ 1889.

ಮೈಸೂರ ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ, ಮತ್ತು ಸದರೀ ಗೆಜೆಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ಮುಂತಾದವುಗಳೂ ಬೆಂಗಳೂರಲ್ಲಿರುವ ಮೈಸೂರ ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.		ಟಪ್ಪಾಲ್ ಹಾಸಲು ಮೈಸೂರು ಕೀಮೆ ಶಿವಾಯಿ ಇತರ ಸ್ಥಳಗಳಿಗೆ.	
	ರೂ.	ಆ.	ರೂ.	ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3	8	1	12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7	0	3	8
ಚೆಷ್ ಮಾಹೇ ಯಾ ಕ್ವಾರ್ಟರಿಗೆ			ದಾಮಾಷಾಯಿ ಪ್ರಕಾರ ದರಗಳು	
ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಷ್ ಯಾ ಆಕ್ಟುಗಳು ಯಾವದೂ ಇಲ್ಲದಿದ್ದರೆ.			0	8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜು ಕೇಳಿ ತಿಳಿದುಕೊಳ್ಳಬಹುದು.

1891ನೇ ಇಸವಿ ಜುಲೈ 2ನೇ ಮುಕ್ತಂ 155ನೇ ನಂಬರ್ ಉಳ್ಳ ಗವರ್ಮೆಂಟ್ ಇಸ್ತಿಹಾರ್‌ನಾಮೆ ಅನುಸರಿಸಿ ಕನ್ನಡ ಗೆಜೆಟ್ ಮೈಸೂರು ಕೀಮೆಯಲ್ಲಿನ ಪಟೇಲ್ ಶಾನುಭೋಗರುಗಳಿಗೆ ಅರ್ಧ ದರಕ್ಕೆ ಕೊಡಲ್ಪಡುವದು; ಆದರೆ ಅಂಥಾ ಪಟೇಲ್, ಶಾನುಭೋಗರುಗಳು ಆ ಕಾಲದಲ್ಲಿ ವಾಸ್ತವ್ಯವಾಗಿ ಪಟೇಲಿ ಯಾ ಶಾನುಭೂವಿಕೆ ಕೆಲಸ ನೋಡುತಲಿದ್ದಾರೆಂಬುದಾಗಿ ಆಯಾ ತಾಲ್ಲೂಕು ಅಮಲ್ದಾರರಿಂದ ವಂದು ಸರಟಿಫಿಕೇಟನ್ನ ಪಡೆದು ಹಾಜರ್ಮಾಡಬೇಕಾಗಿರುತ್ತೆ.

1895ನೇ ಇಸವಿ ಜೂನ್ 21ನೇ ಮುಕ್ತಂ 24205—6—ಜಿ. 6200ನೇ ನಂಬರ್ ಗವರ್ಮೆಂಟ್ ಆರ್ಡರ್ ಅನುಸರಿಸಿ ಮೇಲ್ಕಂಡ ರಿಯಾಯತಿ ದರವು, ನಾಡ ಪಟೇಲರಿಗೂ ಲಗಾವ್ ಮಾಡಲ್ಪಟ್ಟಿರುತ್ತೆ.

ಸಿವಿಲ್ ಕೋರ್ಟಿನಿಂದ ಕೊಡಲ್ಪಡುವ 1860ನೇ ಇಸವಿ XXVIIನೇ ಆಕ್ಟು ಅನುಸರಿಸಿ ಸರ್ಟಿಫಿಕೇಟ್

ಬಗ್ಗೆ ನೋಟಿಸುಗಳು:—

ಮೊದಲನೇ ದಫಾ ಘಾಯಿಷ್ ಮಾಡತಕ್ಕ ಬಗ್ಗೆ ಇಂಗ್ಲೀಷು ಅಥವಾ ಕನ್ನಡ	2	8
ಎರಡನೇ ಸಲ ವ ಆ ತರುವಾಯ ಪ್ರತಿ ಆವರ್ತಿಗೂ ಡಿಟೋ	1	4

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 347ನೇ ಸೆಕ್ಷರ್ಷ ಅನುಸರಿಸಿ ದಿವಾಳೀ ಅಪ್ಲಿಕೇಷ್ಣಗಳ ಬಗ್ಗೆ ನೋಟಿಸುಗಳಿಗೆ :—

ಮೊದಲನೇ ಸಲಕ್ಕೆ	5	0
ಎರಡನೇ ವ ಆ ತರುವಾಯ ಪ್ರತಿ ದಫಾಕ್ಕೆ	2	8

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 354ನೇ ಸೆಕ್ಷರ್ಷ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳೀ ಜುಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತವೆ.

ಡ್ಯೂಪ್ಲಿಕೇಟ್ ಕಾಫೀ ಪಟ್ಟೆ ವಗೈರೇ ಕೊಡುವ ಬಗ್ಗೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸುಗಳಿಗೆ :—

ಮೊದಲನೇ ಸಲಕ್ಕೆ ಪುಟ 1ಕ್ಕೆ ..	10	0
ಎರಡನೇ ಸಲ ವ ಆ ತರುವಾಯ ಪ್ರತಿ ಸಲಕ್ಕೂ " ..	5	0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳಪ್ರಕಾರ ಚಾರ್ಜ್ ಮಾಡಲ್ಪಡುತ್ತೆ:—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ ಪಜ್ತಿ 1ಕ್ಕೆ ..	0	8
ಎರಡನೇ ದಫಾ ಡಿಟೋ ಡಿಟೋ ..	0	6
ಮೂರನೇ ವ ಆ ತರುವಾಯ ಪ್ರತಿ ಸಲಕ್ಕೆ	0	4

ಷರಾ.—ಚಂದಾ ವಗೈರೇ ಬಗ್ಗೆ ಪೋಸ್ಟೇಜ್ ಲೇಬಿಲ್ಲು ಕಳುಹಿಸಲ್ಪಟ್ಟಾಗ ರೂಪಾಯಿಗೆ ಮಂದಾಜು ಯಂತೆ ಜಾಸ್ತೀ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ನಮೆಂಟ್ ಆರ್ಡರ್ ಪ್ರಕಾರ ತಮಾಂ ಚಂದಾ ಪೊಬಲಗುಗಳೂ, ಪ್ರಕಟನೇ ಕಾರ್ಜುಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯಾದ ದರಖಾಸ್ತುಗಳು ಮೈಸೂರ ಗವರ್ನಮೆಂಟ್ ಜನರಲ್ ಮತ್ತು ರೆವಿನ್ಯೂ ಇಲಾಖೆ ಸೆಕ್ರಿಟೆರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದಿಗಳು ಇದರಡಿ ರುಜು ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಆಗಾಯತು ಬಂದು ವಾರದ ಒಳಗಾಗಿ ತಿಳಿಸಲ್ಪಡಬೇಕು.

ಮೈಸೂರ ಗೆಜೆಟ್‌ನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸು ಪಿ ಇನ್ನಿ ಹಾರ್ನಾಮೆಗಳೂ ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಮಂಗಳವಾರದ ದಿವಸ ಮಧ್ಯಾಹ್ನ 12 ಘಂಟೆ ಒಳಗಾಗಿ ಕಂಪ್ಯೆಲರ್ ಆಫಿಸಿಗೆ ತಲಪಬೇಕಾಗಿರುತ್ತೆ, ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರ್ತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಲ್ಲಡುತ್ತೆಂಬ ಖಾತರಿ ಯಿಲ್ಲ.

ಸಿ. ರಾಘವಾಚಾರ್ಲು,
ಮೈಸೂರ ಗೆಜೆಟ್ ಕಂಪ್ಯೆಲರ್.

Mysore Govt. Central Press, Bangalore.—1896.